# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹಾಸನ ನಗರದ ಚನ್ನಪಟ್ಟಣ ಕೆರೆಯ ಅಂಗಳದಲ್ಲಿ ವಿಹಾರದಾಮದ ಅಭಿವೃದ್ಧಿ ಮತ್ತು ಉದ್ಯಾನವನ ನಿರ್ಮಾಣ ಕಾಮಗಾರಿಯ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

** ** **

*ಓದಲಾಗಿದೆ :-*

ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು, ಇವರ ಪತ್ರ ಸಂಖ್ಯೆ: ಕಾನೀನಿನಿ/ತಾಂತ್ರಿಕ-4/Beautification/Channapatna Tank/2018-19/4125, ದಿನಾಂಕ:21-02-2019.

*ಪ್ರಸ್ತಾವನೆ :-*

ಮೇಲೆ ಓದಲಾದ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು, ಇವರು ಹಾಸನ ನಗರದ ಮಧ್ಯಭಾಗದಲ್ಲಿ ನೂತನವಾಗಿ ನಿರ್ಮಿಸಿರುವ ಬಸ್ ನಿಲ್ದಾಣದ ಪಕ್ಕದಲ್ಲಿ ಚನ್ನಪಟ್ಟಣ ಕೆರೆ ಇದ್ದು, ಕೆರೆಯ ಆವರಣದಲ್ಲಿ ಲಭ್ಯವಿರುವ ಸುಮಾರು 53 ಎಕರೆ ಪ್ರದೇಶದಲ್ಲಿ ಆಧುನಿಕ ಮಾದರಿಯ ವಿಹಾರದಾಮ ಹಾಗೂ ಉದ್ಯಾನವನವನ್ನು ನಿರ್ಮಿಸಿ, ಒಂದು ಪ್ರವಾಸಿ ತಾಣವನ್ನಾಗಿ ಅಭಿವೃದ್ಧಿಪಡಿಸಿ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡಲು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

2. ಅದರಂತೆ, ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು, ಇವರು ಸದರಿ ಕಾಮಗಾರಿಯ ಮಾಸ್ಟರ್ ಪ್ಲಾನ್ ಮತ್ತು ವಿವರವಾದ ಯೋಜನಾ ವರದಿಯನ್ನು ರೂ.144.00 ಕೋಟಿಗಳಿಗೆ ತಯಾರಿಸಿ, ದಿನಾಂಕ:01-02-2019 ರಂದು ನಡೆದ ನಿಗಮದ 67ನೇ ಮಂಡಳಿ ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆದಿರುತ್ತಾರೆ.

3. 2018-19 ನೇ ಸಾಲಿನ ಆಯವ್ಯಯದ ಪೌರಾಡಳಿತ ಇಲಾಖೆಯ ಕಂಡಿಕೆ-160 (ಪುಟ ಸಂಖ್ಯೆ:69) ರಲ್ಲಿ, ಹಾಸನ ನಗರದ ಚನ್ನಪಟ್ಟಣ ಕೆರೆಯಲ್ಲಿರುವ ವಿಹಾರಧಾಮದ ಸುತ್ತಲಿನ ರಸ್ತೆಗಳ ಅಭಿವೃದ್ಧಿ, ಸೇತುವೆ ನಿರ್ಮಾಣ, ದೋಣಿ ವಿಹಾರ, ಕಾರಂಜಿ ನಿರ್ಮಾಣ, ಮಕ್ಕಳ ಉದ್ಯಾನವನ, ಪುಟಾಣಿ ರೈಲು ಅಳವಡಿಕೆ ಇತ್ಯಾದಿಗಳಿಗಾಗಿ ರೂ.36.00 ಕೋಟಿಗಳನ್ನು ಒದಗಿಸಲಾಗಿದೆ ಎಂದು ಘೋಷಿಸಲಾಗಿದೆ.

4. ಆರ್ಥಿಕ ಇಲಾಖೆಯು ಸದರಿ ಯೋಜನೆಯ ಬಗ್ಗೆ ಈ ಕೆಳಕಂಡಂತೆ ಅಭಿಪ್ರಾಯ ನೀಡಿರುತ್ತದೆ :

1. ಪ್ರಸ್ತಾಪಿತ ಕಾಮಗಾರಿಯನ್ನು 2018-19ನೇ ಸಾಲಿನ (ಜುಲೈ) ಆಯವ್ಯಯ ಭಾಷಣದಲ್ಲಿ ಘೋಷಿಸಿದಂತೆ ರೂ.36.00 ಕೋಟಿಗಳಿಗೆ ಸೀಮಿತಗೊಳಿಸತಕ್ಕದ್ದು.
2. ಕೆ.ಆರ್.ಡಿ.ಸಿ.ಎಲ್. ಸಂಸ್ಥೆಗೆ ಪೂರಕ ಅಂದಾಜು-1 ರಲ್ಲಿ ಹೆಚ್ಚುವರಿಯಾಗಿ ಒದಗಿಸಿರುವ ರೂ.36.00 ಕೋಟಿಗಳನ್ನು ಅಧ್ಯರ್ಪಿಸತಕ್ಕದ್ದು.

5. ಈ ಹಿನ್ನೆಲೆಯಲ್ಲಿ, ಹಾಸನ ನಗರದ ಚನ್ನಪಟ್ಟಣ ಕೆರೆಯ ಅಂಗಳದಲ್ಲಿ ವಿಹಾರದಾಮದ ಅಭಿವೃದ್ಧಿ ಮತ್ತು ಉದ್ಯಾನವನ ನಿರ್ಮಾಣ ಕಾಮಗಾರಿಯ ರೂ.144.00 ಕೋಟಿ ಮೊತ್ತದ ವಿವರವಾದ ಯೋಜನಾ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

6. ಸದರಿ ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ : ಜಸಂಇ 13 ಎನ್‌ಹೆಚ್‌ಪಿ 2019,**
**ಬೆಂಗಳೂರು, ದಿನಾಂಕ : 28-02-2019**

ಹಾಸನ ನಗರದ ಚನ್ನಪಟ್ಟಣ ಕೆರೆಯ ಅಂಗಳದಲ್ಲಿ ವಿಹಾರದಾಮದ ಅಭಿವೃದ್ಧಿ ಮತ್ತು ಉದ್ಯಾನವನ ನಿರ್ಮಾಣ ಕಾಮಗಾರಿಯ ರೂ.144.00 ಕೋಟಿ (ರೂಪಾಯಿ ಒಂದು ನೂರಾ ನಲವತ್ನಾಲ್ಕು ಕೋಟಿಗಳು ಮಾತ್ರ) ಗಳ ಮೊತ್ತದ ವಿವರವಾದ ಯೋಜನಾ ಅಂದಾಜಿಗೆ ತಾತ್ವಿಕ ಅನುಮೋದನೆ ನೀಡಲಾಗಿದೆ ಮತ್ತು 2019-20ನೇ ಸಾಲಿನಲ್ಲಿ ಕಾಮಗಾರಿಯನ್ನು ರೂ.36.00 ಕೋಟಿಗಳ ಅಂದಾಜು ಮೊತ್ತಕ್ಕೆ ಸೀಮಿತಗೊಳಿಸಿ ಕೈಗೆತ್ತಿಕೊಳ್ಳುವ ಷರತ್ತಿಗೊಳಪಟ್ಟು ಅನುಮೋದನೆ ನೀಡಿದೆ.

2. ಈ ಆದೇಶವನ್ನು ಆರ್ಥಿಕ ಇಲಾಖೆಯು ತನ್ನ ಟಿಪ್ಪಣಿ ಸಂಖ್ಯೆ:ಆಇ 160 ಆಕೋ-1/2019, ದಿನಾಂಕ:23-02-2019, ರಲ್ಲಿ ನೀಡಲಾದ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-2),
ಜಲ ಸಂಪನ್ಮೂಲ ಇಲಾಖೆ,
ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ, ಬೆಂಗಳೂರು.

(ಬಿ.ಹರಿನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-2)
ಜಲ ಸಂಪನ್ಮೂಲ ಇಲಾಖೆ.

ಇವರಿಗೆ :-

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ ಲೆಕ್ಕಪರಿಶೋಧನ), ಕರ್ನಾಟಕ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಹೇಮಾವತಿ ಯೋಜನಾ ವಲಯ, ಗೊರೂರು.
4. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ. ಆರ್ಥಿಕ ಕೋಶ), ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಉಪ ಕಾರ್ಯದರ್ಶಿ (ಸಚಿವ ಸಂಪುಟ), ಕರ್ನಾಟಕ ಸರ್ಕಾರ (ಪ್ರಕರಣ ಸಂಖ್ಯೆ:ಸಿ-173/2019, ದಿನಾಂಕ:25-02-2019).
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.